ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ ,
ಕುಂದಾಪುರ

ಸಿ.ಸಿ. ನಂಬ್ರ: 529/2017

ಚಾಸಾ: 13 ಪ್ರಾಸಾ:5

ದಿನಾಂಕ: 09.09.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ರಾಘವೇಂದ್ರ |
| ತಂದೆಯ ಹೆಸರು | : | ಬಸವ |
| ವಯಸ್ಸು | : | 47 ವರ್ಷ |
| ಉದ್ಯೋಗ | : | ಮುಖ್ಯ ಪೇದೆ |
| ವಾಸ ಸ್ಥಳ | : | ಕುಂದಾಪುರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

<u>**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**</u>

ನಾನು 2012 ರಿಂದ 2023ರವರೆಗೆ ಕುಂದಾಪುರದ ಸಂಚಾರಿ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ: 16-12-2016 ರಂದು ಬೆಳಗ್ಗೆ 11-30 ಗಂಟೆಗೆ ನಾನು ಠಾಣಾ ಪ್ರಭಾರದಲ್ಲಿರುವಾಗ ಚಾಸಾ-1ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಪಡೆದು ಠಾಣಾ ಅಪರಾಧ ಕ್ರಮಾಂಕ 162/2016 ರಂತೆ ಪ್ರಕರಣವನ್ನು ದಾಖಲಿಸಿ ಪ್ರ.ವ.ವರದಿಯನ್ನು ತಯಾರಿಸಿ ಮಾನ್ಯ ನ್ಯಾಯಾಲಯಕ್ಕೂ ಮತ್ತು ಮೇಲಾಧಿಕಾರಿಯವರಿಗೆ ನಿವೇದಿಸಿಕೊಂಡಿರುತ್ತೇನೆ.

ಅನಂತರ ಚಾಸಾ-15ರವರೊಂದಿಗೆ ಘಟನಾ ಸ್ಥಳಕ್ಕೆ ಭೇಟಿ ನೀಡಿ ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ಚಾಸಾ-3 ಮತ್ತು 4 ರವರ ಸಮಕ್ಷಮದಲ್ಲಿ ಪಂಚನಾಮೆಯನ್ನು ನಾನು ಬರೆದಿರುತ್ತೇನೆ. ನಕ್ಷೆಯನ್ನು ಬಿಡಿಸಿ ಚಾಸಾ-2 ರವರ ಹೇಳಿಕೆಯನ್ನು ಬೆರಳಚ್ಚು ಮಾಡಿರುತ್ತೇನೆ. ಮಹಜರು ಕಾಲಕ್ಕೆ ಘಟನಾ ಸ್ಥಳದಲ್ಲಿ ಇದ್ದ ಕಾರನ್ನು ವಶಕ್ಕೆ ಪಡೆದಿರುತ್ತೇವೆ.

ಸಾಕ್ಷಿ ನಿಪಿ-1 ರಿಂದ 3ರಲ್ಲಿನ ಸಹಿಯನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ-1(ಬಿ), ನಿಪಿ-2(ಸಿ) ಮತ್ತು ನಿಪಿ-3(ಸಿ) ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ-4 ಮತ್ತು 5 ರಲ್ಲಿ ವಾಹನವನ್ನು ನೋಡಿ ಗುರುತಿಸಿರುತ್ತಾರೆ. ಪ್ರ.ವ.ವರದಿಯನ್ನು ನಿಪಿ-10 ಎಂದು, ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಾದ ಶ್ರೀ ಎ ಯು ಎಸ್ ರವರಿಂದಃ**

ನಿಪಿ-1ನ್ನು ಠಾಣೆಗೆ ಬರೆದು ಹಾಜರು ಪಡಿಸಿರುತ್ತಾರೆ. ಅದು ಯಾರ ಕೈ ಬರಹ ಎಂದು ನನಗೆ ನಿಖರವಾಗಿ ತಿಳಿದಿಲ್ಲ. ಅಪಘಾತದ ಸ್ಥಳವನ್ನು ಪರಿಶೀಲಿಸದೆ ಪ್ರ.ವ.ವರದಿಯನ್ನು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಪಂಚರಾದ ಚಾಸಾ-3 ಮತ್ತು 4 ರವರು ಸ್ಥಳದಲ್ಲಿ ಇದ್ದರು. ಸದ್ರಿ ವ್ಯಕ್ತಿಗಳು ಸ್ಥಳೀಯರು ಅಲ್ಲದೆ ಕೋಟಾ ಗ್ರಾಮದ ವಾಸಿಗಳು ಎಂದರೆ ಸರಿಯಲ್ಲ. ಚಾಸಾ-1 ರವರಿಗೆ ಚಾಸಾ-3 ಮತ್ತು 4 ರವರು ಸಂಬಂಧಿಕರಾದ ಕಾರಣ ಠಾಣೆಗೆ ಬಂದು ಸಹಿ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಸ್ಥಳಕ್ಕೆ ಭೇಟಿ ನೀಡದೆ ಪಂಚನಾಮೆಯನ್ನು ಠಾಣೆಯಲ್ಲಿ ಸೃಷ್ಟಿಸಿದ್ದರೂ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ವಶಕ್ಕೆ ಪಡೆದ ಕಾರು ಕೆಎಲ್-10-ಎನ್-4837 ಆಗಿರುತ್ತದೆ. ಅದು ಕೆಂಪು ಬಣ್ಣದ್ದಾಗಿದ್ದು ಯಾವ ಮಾಡೆಲ್ ಎಂದು ಹೇಳಲಾಗುವುದಿಲ್ಲ. ಮೇಲೆ ಗುರುತಿಸಿದ ದಾಖಲೆಗಳನ್ನು ಠಾಣೆಯಲ್ಲಿ ಸೃಷ್ಟಿಸಿದ್ದು ಪ್ರಕರಣಕ್ಕೆ ಅನುಗುಣವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**